# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

## ವಾರ್ಡ್ ನಂ.71 : ಹೆಗ್ಗನಹಳ್ಳಿ

**ದಿನಾಂಕ: 05.12.2020 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀ ಬಿ.ಆರ್ ರವಿಕುಮಾರ್ ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್ ರವಿಕುಮಾರ್ | ನೋಡಲ್ ಅಧಿಕಾರಿ-ವಾರ್ಡ್ ನಂ.71, ಸಹಾಯಕ ನಿರ್ದೇಶಕರು (ಪಶುಪಾಲನೆ) |
| 2 | ಶ್ರೀ ಮಂಜುನಾಥ್ ಡಿ ಎಸ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು-ವಾರ್ಡ್ 71 |
| 3 | ಶಿವಲಿಂಗಯ್ಯ.ಕೆ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 |
| 4 | ಸುರೇಶ್ ಎಂ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 |
| 5 | ವಿನಾಯಕ್ ನಾಯ್ಕ್ | ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 6 | ಕಿರಣ್ ಕೆ | ಬೆಸ್ಕಾಂ ವಾರ್ಡ್ 71 |
| 7 | ವೆಂಕಟರಾಜು | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ (ಹೆಗ್ಗನಹಳ್ಳಿ ನಾಗರೀಕರ ಹಿತ ರಕ್ಷಣಾ ವೇದಿಕೆ) |
| 8 | ಲಿಂಗಯ್ಯ | ಕಂದಾಯ ಪರಿವೀಕ್ಷಕರು, ವಾರ್ಡ್ 71 |
| 9 | ಕೆ ಎನ್ ರಾಜಪ್ಪ | ಆರ್.ಎಫ್.ಓ ದಾಸರಹಳ್ಳಿ ವಲಯ |
| 10 | ಪ್ರಕಾಶ್ ಹೆಚ್ ಆರ್ | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ |
| 11 | ಸ್ವಾಮಿ | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ |
| 12 | ವಿ ಲೋಕೇಶ್ ಗೌಡ | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ |
| 13 | ಬಿ.ಎಸ್.ಗಿರೀಗೌಡ | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ |
| 14 | ರಂಗನಾಥ್ | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ |

:ನಡಾವಳಿಯ ವರದಿ:

- ಕಾರ್ಯದರ್ಶಿಗಳಾದ ಶ್ರೀ ಡಿ.ಎಸ್.ಮಂಜುನಾಥ್ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

- **<u>ಸ್ವಚ್ಛತೆ ಮತ್ತು ಘನ ತ್ಯಾಜ್ಯ ನಿರ್ವಹಣೆ ಬಗ್ಗೆ:</u>**
  - ಪ್ರಕಾಶ್ ಹೆಚ್ ಆರ್ ಮಾತನಾಡಿ ಕಸದ ಆಟೋಗಳಿಗೆ ಮೈಕ್ ಅಳವಡಿಸಲು ಕೋರಿದರು.
    - ಸುರೇಶ್ ಎಂ, ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 ರವರು ಪ್ರತಿಕ್ರಿಯಿಸಿ ಈಗಾಗಲೇ 10 ಆಟೋಗಳಿಗೆ ಮೈಕ್ ಅಳವಡಿಸಲಾಗಿದ್ದು, ಬಾಕಿ ಆಟೋಗಳಿಗೆ ಡಿಸೆಂಬರ್ 31ರ ಒಳಗೆ ಅಳವಡಿಸಲಾಗುವುದು ಎಂದು ತಿಳಿಸಿದರು
  - ವಿ ಲೋಕೇಶ್ ಗೌಡ ರವರು ಮಾತನಾಡುತ್ತಾ, ಚಳಿಗಾಲವಾದ್ದರಿಂದ ಸೊಳ್ಳೆಗಳ ಕಾಟ ಜಾಸ್ತಿ ಇರುವುದರಿಂದ ವಾರ್ಡ್ ವ್ಯಾಪ್ತಿಯಲ್ಲಿ ಫಾಗಿಂಗ್ ಮಾಡಲು ಕೋರಿದರು.
    - ಸುರೇಶ್ ಎಂ, ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 ರವರು ಪ್ರತಿಕ್ರಿಯಿಸಿ ಫಾಗಿಂಗ್ ಮಾಡಲು ವಾರ್ಡ್ ಮಟ್ಟದಲ್ಲಿ ಫಾಗಿಂಗ್ ಮಷಿನ್ ಇರುವುದಿಲ್ಲ. ಈ ಬಗ್ಗೆ ಎಂ.ಓ.ಹೆಚ್ ರವರ ಗಮನಕ್ಕೆ ತಂದು ಕ್ರಮವಹಿಸಲಾಗುವುದು ಎಂದು ತಿಳಿಸಿದರು.

- **<u>ಕೋವಿಡ್-19, ಸಾಂಕ್ರಾಮಿಕ ರೋಗದ ಬಗ್ಗೆ</u>**
  - ಶಿವಲಿಂಗಯ್ಯ.ಕೆ, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 ರವರು ಮಾತಾನಾಡಿ ವಾರ್ಡ್ 71ರ ವ್ಯಾಪ್ತಿಯಲ್ಲಿ ಪ್ರತಿ ದಿನ 180-200 ಟೆಸ್ಟ್ ನಡೆಸಲಾಗಿದ್ದು, ಇವುಗಳಲ್ಲಿ ಬೆರಳಣಿಕೆ ಸಂಖ್ಯೆಯಲ್ಲಿ ಸೋಂಕಿತರು ಕಂಡುಬರುತ್ತಿದ್ದು, ಸಾರ್ವಜನಿಕರಲ್ಲಿ ಹಾಗೂ ಬೀದಿ ವ್ಯಾಪಾರಿಗಳಲ್ಲಿ ಸ್ವಚ್ಛತೆ ಹಾಗೂ ಸಾಮಾಜಿಕ ಅಂತರ ಕಾಯ್ದುಕೊಳ್ಳುವ ಬಗ್ಗೆ ಅರಿವು ಮೂಡಿಸಲಾಗಿದೆ ಎಂದು ತಿಳಿಸಿದರು.
- **<u>ರಸ್ತೆ ಗುಂಡಿಗಳ ನಿರ್ವಹಣೆ ಬಗ್ಗೆ</u>**
  - ವಿ ಲೋಕೇಶ್ ಗೌಡ ರವರು ಮಾತನಾಡುತ್ತಾ, ನಡಕೇರಪ್ಪ ಕೈಗಾರಿಕಾ ಪ್ರದೇಶದ ಮುಖ್ಯರಸ್ತೆ ಹಾಗೂ 14ನೇ ಸಿ ಅಡ್ಡರಸ್ತೆಗಳಲ್ಲಿ ರಸ್ತೆಗುಂಡಿಗಳನ್ನು ಮುಚ್ಚುವಂತೆ ಕೋರಿದರು
    - ಮಂಜುನಾಥ್ ಡಿ.ಎಸ್ ಸಹಾಯಕ ಅಭಿಯಂತರರು, ವಾರ್ಡ್ ನಂ.71 ರವರು ಮಾತನಾಡಿ ಈಗಾಗಲೇ ನಡಕೇರಪ್ಪ ಕೈಗಾರಿಕಾ ಪ್ರದೇಶದ ಮುಖ್ಯರಸ್ತೆ ಹಾಗೂ 14ನೇ ಸಿ ಅಡ್ಡರಸ್ತೆಗಳಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ಪಟ್ಟಿ ಮಾಡಿಕೊಂಡು ವೆಟ್ ಮಿಕ್ಸ್ ಅಳವಡಿಸಲಾಗಿದೆ. ಅವುಗಳಿಗೆ ಈ ದಿನ ರಾತ್ರಿ ಡಾಂಬರು ಹಾಕಲಾಗುವುದು ಎಂದು ತಿಳಿಸಿದರು.
- **<u>ಒಳಚರಂಡಿ ಮತ್ತು ನೀರು ಸಂಪರ್ಕಗಳಿಗೆ ಸಂಬಂಧಿಸಿದ ಸಮಸ್ಯೆಗಳ ಬಗ್ಗೆ</u>**
  - ಪ್ರಕಾಶ್ ಹೆಚ್ ಆರ್ ರವರು ಮಾತನಾಡುತ್ತಾ, ಗಜಾನನ ನಗರ, ಲಕ್ಷ್ಮಣ ನಗರ, ಸಂಜೀವಿನಿ ನಗರ 1,2,3ನೇ ಹಂತಗಳಲ್ಲಿ ಅಲ್ಲಲ್ಲೆ ಒಳಚರಂಡಿ ದುರಸ್ತಿಪಡಿಸಿದ್ದು ರಸ್ತೆಯನ್ನು Restoration ಮಾಡಿರುವುದಿಲ್ಲ ಈ ಬಗ್ಗೆ ಕ್ರಮವಹಿಸಲು ಕೋರಿದರು.
    - ಈ ಬಗ್ಗೆ ವಿನಾಯಕ್ ನಾಯ್ಕ್, ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ಮಾತನಾಡಿ ಹಿಂದೆ ಇವುಗಳನ್ನು ದುರಸ್ಥಿಪಡಿಸಿದ್ದು, ಶೀಘ್ರದಲ್ಲಿಯೇ ವೆಟ್ ಮಿಕ್ಸ್ ಅಳವಡಿಸಿ Restoration ಮಾಡಿಸಲಾಗುವುದು ಎಂದು ತಿಳಿಸಿದರು.

- **<u>ವಿದ್ಯುತ್ ಸಮಸ್ಯೆಗಳ ಬಗ್ಗೆ</u>**
  - ವಿ ಲೋಕೇಶ್ ಗೌಡ ರವರು ಮಾತನಾಡುತ್ತಾ, ಬೆಸ್ಕಾಂ ನವರು ವಾರ್ಡಿನ ಎಲ್ಲಾ ಕಡೆ ಎಬಿಸಿ ಕೇಬಲ್ ಅಳವಡಿಸುತ್ತಿದ್ದು, ಬಹಳ ದೂರ ದೂರಕ್ಕೆ ಕಂಬಗಳನ್ನು ಅಳವಡಿಸುತ್ತಿರುವುದರಿಂದ ಕೇಬಲ್‌ಗಳು ಜೋತು ಬೀಳುತ್ತಿರುವುದು ಕಂಡುಬರುತ್ತಿದೆ. ಈ ಬಗ್ಗೆ ಕ್ರಮವಹಿಸಲು ಕೋರಿದರು

- ಇದಕ್ಕೆ ಬೆಸ್ಕಾಂ ವತಿಯಿಂದ ಕಿರಣ್ ಕೆ ರವರು ಪ್ರತಿಕ್ರಿಯಿಸಿ ನಿಯಮಾನುಸಾರ 30ಮೀ.ಗಳಿಗೆ ಒಂದರಂತೆ ಕಂಬಗಳನ್ನು ಅಳವಡಿಸಿ, ಕೇಬಲ್‌ಗಳು ಜೋತುಬೀಳದಂತೆ ನಟ್ & ಬೋಲ್ಟ್‌ಗಳಿಂದ ಬಿಗಿ ಮಾಡಿ ಕ್ರಮವಹಿಸಲಾಗುವುದು ಎಂದು ತಿಳಿಸಿದರು.

- ವೆಂಕಟರಾಜು ರವರು ಮಾತನಾಡುತ್ತಾ, ಬೆಸ್ಕಾಂ ನವರು ಹೊಯ್ಸಳನಗರದಲ್ಲಿ ಯಾವುದೇ ಮಾಹಿತಿ ನೀಡದೇ ಪದೆ ಪದೇ ವಿದ್ಯುತ್ ಕಡಿತಗೊಳಿಸುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗಿರುತ್ತದೆ ಈ ಬಗ್ಗೆ ಕ್ರಮವಹಿಸಲು ಕೋರಿದರು
  - ಇದಕ್ಕೆ ಬೆಸ್ಕಾಂ ವತಿಯಿಂದ ಕಿರಣ್ ಕೆ ರವರು ಪ್ರತಿಕ್ರಿಯಿಸಿ ಸದರಿ ಪ್ರದೇಶದಲ್ಲಿ ಎ.ಬಿ.ಸಿ ಕೇಬಲ್ ಅಳವಡಿಸಲಾಗುತ್ತಿದ್ದು, ಅಳವಡಿಸುವ ವೇಳೆಯಲ್ಲಿ ಮಾತ್ರ ವಿದ್ಯುತ್ ಕಡಿತಗೊಳಿಸಲಾಗುತ್ತಿದ್ದು, ಕೇಬಲ್ ಅಳವಡಿಸುವ ಕಾರ್ಯ ಪೂರ್ಣಗೊಂಡ ನಂತರ ಯಾವುದೇ ಅಡೆತಡೆ ಉಂಟಾಗುವುದಿಲ್ಲ ಎಂದು ತಿಳಿಸಿದರು.

- <u>ಅರಣ್ಯ ಇಲಾಖೆಗೆ ಕುರಿತ ಸಮಸ್ಯೆಗಳ ಬಗ್ಗೆ</u>
  - ಬಿ.ಎಸ್.ಗಿರೀಗೌಡ ಮಾತನಾಡುತ್ತಾ, ವಾರ್ಡಿನ ದೊಡ್ಡ ದೊಡ್ಡ ರಸ್ತೆಗಳಲ್ಲಿ ಹೊಂಗೆ, ಸಂಪಿಗೆ, ಮಹಾಗನಿಯಂಥಹ ಮರಗಳನ್ನು ಹಾಕಲು ಕೋರಿದರು.
    - ಇದಕ್ಕೆ ದಾಸರಹಳ್ಳಿ ವಲಯ ವತಿಯಿಂದ ಹಾಜರಿದ್ದ ಆರ್.ಎಫ್.ಓ ಕೆ.ಎನ್.ರಾಜಪ್ಪರವರು ಪ್ರತಿಕ್ರಿಯಿಸಿ, ಈ ಬಗ್ಗೆ ಈ ವರ್ಷದ ಕ್ರಿಯಾಯೋಜನೆಯಲ್ಲಿ ಅಳವಡಿಸಿಕೊಂಡು ಕ್ರಮವಹಿಸಲಾಗುವುದೆಂದು ತಿಳಿಸಿದರು.

➢ ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡಿನ ಕುಂದುಕೊರತೆಗಳತ್ತ ಗಮನಹರಿಸಿ ವಾರ್ಡ್ ಅಭಿವೃದ್ಧಿ ಪಡಿಸಲು ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಡಿ.ಎಸ್.ಮಂಜುನಾಥ್ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಸದಸ್ಯ ಕಾರ್ಯದರ್ಶಿ–ವಾರ್ಡ್ 71 ಹಾಗೂ**
**ಸಹಾಯಕ ಅಭಿಯಂತರರು,**

**(ಬಿ.ಆರ್ ರವಿಕುಮಾರ್)**
**ನೋಡಲ್ ಅಧಿಕಾರಿ ವಾರ್ಡ್–71**

**ಪ್ರತಿಯನ್ನು:**

1) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
2) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
3) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
4) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.71 ರವರ ಮಾಹಿತಿಗಾಗಿ
6) ಸಹಾಯಕ ಅಭಿಯಂತರರು (ವಿದ್ಯುತ್ ಬೆಸ್ಕಾಂ) ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
7) ಸಹಾಯಕ ಅಭಿಯಂತರರು (ವಿದ್ಯುತ್ (ಬೀದಿದೀಪ) ಬಿಬಿಎಂಪಿ ರವರ ಮಾಹಿತಿಗಾಗಿ ಸೂಕ್ತ ಕ್ರಮಕ್ಕಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ